## ಪದ್ಯ ಭಾಗ–೧ ಹೊಸಹಾಡು

**ಆ) ಮೂರು–ನಾಲ್ಕು ವಾಕ್ಯಗಳಲ್ಲಿ ಉತ್ತರಿಸಿ**

**೧) ಕವಿ ಎಂತಹ ಹಾಡನ್ನು ಹಾಡಿದಾಗ ವೀರಧ್ವನಿಯೇರಬೇಕು ಎಂದು ಬಯಸುತ್ತಾರೆ?**

**ಉತ್ತರ:** ಹೊಸ ಭಾವನೆಯನ್ನು ಮೂಡಿಸುವ, ಹೊಸ ಚೈತನ್ಯ, ಹೊಸ ಶಕ್ತಿಯನ್ನು ತುಂಬಿಸುವ ಹಾಡನ್ನು ಹಾಡಬೇಕು. ಅಂತಹ ಹಾಡನ್ನು ಹಾಡಿದಾಗ ಬಹಳ ಗಂಭೀರವಾದ ಭಾವನೆಯ ತರಂಗಗಳು ಹರಡಿ ವೀರಧ್ವನಿಯೇರಬೇಕು ಎಂದು ಕವಿ ಬಯಸುತ್ತಾರೆ.

**೨) ಕವಿ ಎಂತಹ ಹಾಡು ಗುಡುಗಬೇಕು ಎಂದು ಆಶಿಸುತ್ತಾರೆ?**

**ಉತ್ತರ:** ಜಾತಿ–ಕುಲ–ಮತ–ಧರ್ಮ ಎಂಬ ಪಾಶಗಳನ್ನು ಕಡಿದೊಗೆದು ಉತ್ಸಾಹದಿಂದ ಎದೆಹಿಗ್ಗಿ ಹಾಡಬೇಕು. ಆ ಹಾಡು ಯುಗಯುಗಗಳಾಚೆಗೂ ಜಗತ್ತಿನ ಮೂಲೆ ಮೂಲೆಗೂ ತಲುಪುವಂತ ಹಾಡು ಗುಡುಗಬೇಕು ಎಂದು ಕವಿ ಆಶಿಸುತ್ತಾರೆ.

**೩) ಈ ಹಾಡು ಹೊಸತು ಎಂದು ಕವಿ ಹೇಳಲು ಕಾರಣವೇನು?**

**ಉತ್ತರ:** ಈ ಹೊಸ ಹಾಡು ಇದೇ ಮೊದಲ ಹಾಡಾಗಿದ್ದು ಇದಕ್ಕೂ ಮೊದಲು ಇಂತಹ ಹಾಡು ಇರಲಿಲ್ಲ. ಅಂದಿನ ಕಷ್ಟಗಳು ಅಂದಂದೇ ಮುಗಿದಿವೆ. ಇಂದು ಅವುಗಳ ಗೊಡವೆ ಇಲ್ಲ. ಆದ್ದರಿಂದ ಈ ಹಾಡು ಹೊಸತು ಹಾಡು ಎಂದು ಕವಿ ಹೇಳಿದ್ದಾರೆ.

**ಇ) ಎಂಟು–ಹತ್ತು ವಾಕ್ಯಗಳಲ್ಲಿ ಉತ್ತರಿಸಿ.**

**೧) ಹೊಸಹಾಡು ಪದ್ಯದ ಸಾರಾಂಶವನ್ನು ನಿಮ್ಮ ಮಾತುಗಳಲ್ಲಿ ಬರೆಯಿರಿ.**

ಬದುಕಿಗೆ ಹೊಸ ತಿರುವನ್ನು ನೀಡಬಲ್ಲ, ಹೊಸ ಆಶಯವನ್ನು, ಜೀವನದ ಗತಿಯನ್ನು ಬದಲಿಸಿ ಹೊಸ ಹುರುಪನ್ನು ತುಂಬಬಲ್ಲ, ಹಳೆಯ ಮೌಢ್ಯವನ್ನು ಕಡಿದೊಗೆದು ಹೊಸ ಭಾವನೆಗಳನ್ನು ಸೃಜಿಸಬಲ್ಲ ಹೊಸ ಹಾಡನ್ನು ಹಾಡಬೇಕು. ನಮ್ಮನ್ನು ಬಿಗಿದಿರುವ ಜಾತಿ–ಕುಲ–ಮತ–ಧರ್ಮ ಎಂಬ ಪಾಶಗಳನ್ನು ಕತ್ತರಿಸಿ ಉತ್ಸಾಹದಿಂದ ಹಾಡಬೇಕು. ಆ ಸಮಾನತಾ ಭಾವವು ಯುಗಯುಗಗಳಲ್ಲಿ ಜಗತ್ತಿನ ಮೂಲೆ ಮೂಲೆಯನ್ನು ತಲುಪಬೇಕು. ಆ ಹೊಸ ಹಾಡನ್ನು ಉನ್ನತ ಶಿಖರದ ತುದಿಯಲ್ಲಿ ನಿಂತು ಹಾಡಿದಾಗ ಅದರ ನುಡಿಗುಂಡುಗಳು ದಶದಿಕ್ಕಿಗೂ ಸಿಡಿದು ಜನರಲ್ಲಿ ತುಂಬಿರುವ ಭಯವನ್ನು ಓಡಿಸಬೇಕು.

ಗಂಡೆದೆಯ ಗರ್ಜನೆಗೆ ನಮ್ಮ ದೇಶದ ಕೋಟ್ಯಂತರ ಜನರು ದನಿಗೂಡಿಸಬೇಕು. ಆ ಒಕ್ಕೊರಲಿನ ಏಕತಾಭಾವದ ಪ್ರತಿಧ್ವನಿಯು ಭೂಮಿ–ಆಕಾಶವನ್ನು ಆವರಿಸಬೇಕು. ಜಡತ್ವದಿಂದ ಕೂಡಿರುವ ಜನರು ಎಚ್ಚೆತ್ತು ಅಂಧಕಾರದ ಕತ್ತಲೆಯಿಂದ ಆವರಿಸಲ್ಪಟ್ಟಿರುವ ಬಾನು–ಭೂಮಿಯನ್ನು ಬೆಳಗಬೇಕು. ಪ್ರತಿಯೊಬ್ಬರ ನಡೆ–ನುಡಿಯಲ್ಲಿ ಕ್ರಾಂತಿಯ ಕಿಡಿ ಕೆರಳಬೇಕು.

ಜಯವನ್ನು ಹೊಂದಿದ ಮಾತೆಯೇ ನೀನು ಹೆದರದೆ ಧೈರ್ಯದಿಂದ ತಲೆ ಎತ್ತಿ ನೋಡು. ಹಿಂದಿನ ಪಾಡು ಹಿಂದೆಯೇ ಮುಗಿಯಿತು. ಇದೇ ಮೊದಲು. ಇದಕ್ಕಿಂತ ಮುಂಚೆ ಇಂತಹ ಹಾಡು ಇರಲಿಲ್ಲ. ಆದ್ದರಿಂದ ಇಂದು ಇದೇ ಹೊಸಹಾಡು. ಎಂದು ಹೇಳುತ್ತಾ ಹೊಸ ಹುರುಪನ್ನು ತುಂಬುವ ಹಾಡು ಇದಾಗಿದೆ. ಇಂತಹ ಸ್ಫೂರ್ತಿಯ ಚಿಲುಮೆಯಾಗುವ ಹಾಡನ್ನು ಹಾಡಬೇಕು, ಅದು ನಿತ್ಯ ನೂತನವಾಗಿರಬೇಕೆಂಬುದು ಪದ್ಯದ ಆಶಯವಾಗಿದೆ.

**ಈ) ಸಂದರ್ಭ ಸಹಿತ ವಿವರಿಸಿ**

**೧) "ತೀವ್ರತರ ಗಂಭೀರ ಭಾವನೆಯ ತೆರೆ ಮಸಗಿ ವೀರಧ್ವನಿಯೇರಬೇಕು"**

**ಉತ್ತರ: ಆಯ್ಕೆ:** ಈ ವಾಕ್ಯವನ್ನು **ಕಯ್ಯಾರ ಕಿಞ್ಞಣ್ಣ ರೈ** ಅವರ **'ಹೊಸಹಾಡು'** ಎಂಬ ಪದ್ಯಭಾಗದಿಂದ ತೆಗೆದುಕೊಳ್ಳಲಾಗಿದೆ.

**ಸಂದರ್ಭ:** ಬದುಕಿಗೆ ಹೊಸ ತಿರುವನ್ನು ನೀಡಬಲ್ಲ, ಹೊಸ ಆಶಯವನ್ನು, ಜೀವನದ ಗತಿಯನ್ನು ಬದಲಿಸಿ ಹೊಸ ಹುರುಪನ್ನು ತುಂಬಬಲ್ಲ ಹಾಡನ್ನು ಹಾಡಬೇಕು ಎಂದು ಹೇಳುವ ಸಂದರ್ಭದಲ್ಲಿ ಕವಿ ಈ ಮಾತನ್ನು ಹೇಳಿದ್ದಾರೆ. ಹೊಸಹಾಡು ಹಾಡಿದಾಗ ಬಹಳ ಗಂಭೀರವಾದ ಭಾವನೆಯು ಎಲ್ಲೆಡೆ ಹರಡಿ ವೀರಧ್ವನಿ ಏರಬೇಕು ಎಂದು ಕವಿ ಹೇಳಿದ್ದಾರೆ.

**ಸ್ವಾರಸ್ಯ:** ಹೊಸ ಹಾಡನ್ನು ಕೇಳಿದವರಲ್ಲಿ ವೀರತ್ವ ಮೂಡಬೇಕು ಎಂಬುದನ್ನು **ವೀರಧ್ವನಿ ಏರಬೇಕು** ಎಂದು ಕವಿ ಹೇಳಿರುವುದು ಸ್ವಾರಸ್ಯವಾಗಿದೆ.

**೨) "ಯುಗಯುಗಗಳಾಚೆಯಲಿ ಲೋಕಲೋಕಾಂತರದಲಿ ಆ ಹಾಡು ಗುಡುಗಬೇಕು"**

**ಉತ್ತರ: ಆಯ್ಕೆ:** ಈ ವಾಕ್ಯವನ್ನು **ಕಯ್ಯಾರ ಕಿಞ್ಞಣ್ಣ ರೈ** ಅವರ **'ಹೊಸಹಾಡು'** ಎಂಬ ಪದ್ಯಭಾಗದಿಂದ ತೆಗೆದುಕೊಳ್ಳಲಾಗಿದೆ.

**ಸಂದರ್ಭ:** ನಮ್ಮನ್ನು ಬಿಗಿದಿರುವ ಜಾತಿ–ಕುಲ–ಮತ–ಧರ್ಮ ಎಂಬ ಪಾಶಗಳನ್ನು ಕತ್ತರಿಸಿ ಉತ್ಸಾಹದಿಂದ ಹಾಡಬೇಕು. ಎಂದು ಹೇಳುವ ಸಂದರ್ಭದಲ್ಲಿ ಕವಿ ಆ ಸಮಾನತಾ ಭಾವವು 'ಯುಗಯುಗಗಳಲ್ಲಿ ಜಗತ್ತಿನ ಮೂಲೆ ಮೂಲೆಯನ್ನು ತಲುಪಬೇಕು' ಎಂದು ಹೇಳಿದ್ದಾರೆ.

**ಸ್ವಾರಸ್ಯ:** ಜಾತಿ–ಕುಲ–ಮತ–ಧರ್ಮ ಎಂಬ ಕಟ್ಟಳೆಗಳನ್ನು ಮೀರಿ ನಮ್ಮಲ್ಲಿ ಮನುಜ ಮತದ ಭಾವನೆ ಮೂಡಬೇಕು ಎಂಬುದು ಇಲ್ಲಿನ ಸ್ವಾರಸ್ಯವಾಗಿದೆ.

**೩) "ಜಡನಿದ್ರೆ ಸಿಡಿದೆದ್ದ ವೀರಾಟ್ಟಹಾಸದಲಿ ಬಾನು ಬುವಿ ಬೆಳಗಬೇಕು" ಮತ್ತು**

**೪) "ನಡೆನುಡಿಗಳೆಡೆಯಲ್ಲಿ ಪದತಾಳ ಗತಿಯಲ್ಲಿ ಕ್ರಾಂತಿಕಿಡಿ ಕೆರಳಬೇಕು"**

**ಉತ್ತರ: ಆಯ್ಕೆ:** ಈ ವಾಕ್ಯವನ್ನು **ಕಯ್ಯಾರ ಕಿಞ್ಞಣ್ಣ ರೈ** ಅವರ **'ಹೊಸಹಾಡು'** ಎಂಬ ಪದ್ಯಭಾಗದಿಂದ ತೆಗೆದುಕೊಳ್ಳಲಾಗಿದೆ.

**ಸಂದರ್ಭ: ನಮ್ಮ** ನಡೆ–ನುಡಿಗಳಲ್ಲಿ ಕ್ರಾಂತಿ(ಬದಲಾವಣೆ)ಯನ್ನು ಉಂಟುಮಾಡಬೇಕಾಗಿರುವುದರ ಬಗ್ಗೆ ತಿಳಿಸುವ ಸಂದರ್ಭದಲ್ಲಿ ಕವಿ ಈ ಮಾತನ್ನು ಹೇಳಿದ್ದಾರೆ. ನಾವು ಜಡನಿದ್ರೆಯಿಂದ ಎಚ್ಚೆತ್ತುಕೊಂಡು ವೀರ ಅಟ್ಟಹಾಸದಿಂದ ಬಾನು ಮತ್ತು ಭೂಮಿಯನ್ನು ಬೆಳಗಬೇಕು ಹಾಗೂ ನಮ್ಮ ಪ್ರತಿ ಹೆಜ್ಜೆಯಲ್ಲೂ ಕ್ರಾಂತಿಯನ್ನುಂಟುಮಾಡಬೇಕು ಎಂದು ಕವಿ ಹೇಳಿದ್ದಾರೆ.

**ಸ್ವಾರಸ್ಯ:** ಒಳ್ಳೆಯ ಬದಲಾವಣೆಯನ್ನು ಉಂಟುಮಾಡಬೇಕಾದತ ಮೊದಲು ಮೌಢ್ಯಾಂಧಕಾರಗಳಿಂದ ಜಡವಾಗಿರುವ ಜನರಲ್ಲಿ ಜಾಗೃತಿ ಮೂಡಿಸಬೇಕು ಎಂಬುದು ಇಲ್ಲಿನ ಸ್ವಾರಸ್ಯವಾಗಿದೆ.

**೫) "ಇದೋ ಮೊದಲು ಮುನ್ನಿಲ್ಲ–ಮುಗಿದುದಂದಿನ ಪಾಡು ಹೊಸತಿಂದು ಹೊಸತು ಹಾಡು"**

**ಉತ್ತರ: ಆಯ್ಕೆ:** ಈ ವಾಕ್ಯವನ್ನು **ಕಯ್ಯಾರ ಕಿಞ್ಞಣ್ಣ ರೈ** ಅವರ **'ಹೊಸಹಾಡು'** ಎಂಬ ಪದ್ಯಭಾಗದಿಂದ ತೆಗೆದುಕೊಳ್ಳಲಾಗಿದೆ.

**ಸಂದರ್ಭ:** ಕವಿಯು ಹೊಸಹಾಡಿನ ಬಗ್ಗೆ ಹೇಳುತ್ತಾ ಜಯಜನನಿಯಾದ ಭಾರತಾಂಬೆಯನ್ನು ಕುರಿತು "ಶಿರವೆತ್ತಿ ವೀರಭರವಸೆಯಿಂದ ಹೊಸಹಾಡನ್ನು ಕೇಳು" ಎಂದು ಹೇಳುವ ಸಂದರ್ಭದಲ್ಲಿ ಹಿಂದಿನ ಪಾಡು ಹಿಂದೆಯೇ ಮುಗಿಯಿತು. ಇದೇ ಮೊದಲು. ಇದಕ್ಕಿಂತ ಮುಂಚೆ ಇಂತಹ ಹಾಡು ಇರಲಿಲ್ಲ. ಆದ್ದರಿಂದ ಇಂದು ಇದೇ ಹೊಸಹಾಡು. ಎಂದು ಹೇಳಿದ್ದಾರೆ.

**ಸ್ವಾರಸ್ಯ:** ಹಿಂದೆ ಆಗಿರುವ ಹಳೆಯದನ್ನು ನೆನೆಯುತ್ತಾ ಇಂದಿನ ಅವಕಾಶದಿಂದ ವಂಚಿತರಾಗಬಾರದು ಎಂಬುದು ಇಲ್ಲಿನ ಸ್ವಾರಸ್ಯವಾಗಿದೆ.